**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No.**185/2020

**PW.** 7

**CW.** 9

**ಸಾಕ್ಷಿಯ ಹೆಸರು –ಶಿವ**

**ತಂದೆಯ ಹೆಸರು –ಚೆಲುವಯ್ಯ**

**ವಯಸ್ಸು –55 ವರ್ಷಗಳು**

ದಿನಾಂಕ 28–05–2025 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ವ್ಯವಸಾಯ**

**ವಾಸಸ್ಥಳ –ಚಾಮಲಾಪುರ ಗ್ರಾಮ , ಹೆಚ್ ಡಿ ಕೋಟೆ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ಆರೋಪಿತರು , ಚಾಸಾ–1 ಮತ್ತು ಅವರ ಹೆಂಡತಿ ಗೊತ್ತು. ಮೃತ ರಾಜಶೆಟ್ಟಿ ಗೊತ್ತು. ಈಗ್ಗೆ 5–6 ವರ್ಷಗಳ ಹಿಂದೆ ಮೃತಪಟ್ಟಿದ್ದು , ಹೇಗೆ ಮೃತಪಟ್ಟ ಎಂದು ನನಗೆ ಗೊತ್ತಿಲ್ಲ. ಆರೋಪಿತರು ಚಾಸಾ–1 , ಅವರ ಹೆಂಡತಿ ಮತ್ತು ರಾಜಶೆಟ್ಟಿ ಮೇಲೆ ಗಲಾಟೆ ಮಾಡಿದ್ದನ್ನು ನಾನು ನೋಡಿಲ್ಲ , ಆ ಬಗ್ಗೆ ಪೊಲೀಸರ ಮುಂದೆ ಹೇಳಿಕೆ ನೀಡಿಲ್ಲ.

(**ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೇಳಿದ್ದು ಸಾಕ್ಷಿಯ ಸಾಕ್ಷ್ಯ ಮತ್ತು ಇತರೆ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು**.)

**ಪಾಟೀಸವಾಲುಃ– ಸರ್ಕಾರಿ ಅಭಿಯೋಜಕರಿಂದಃ–**

ಚಾಸಾ–8 ಅಂಗನವಾಡಿ ಶಿಕ್ಷಕಿ ಎಂದರೆ ಸರಿ . 1 ನೇ ಆರೋಪಿ ಗ್ರಾಮಪಂಚಾಯಿತಿ ಸದಸ್ಯ ಎಂದರೆ ಸರಿ. ಚಾಸಾ–8 ಅಂಗನವಾಡಿ ಕೇಂದ್ರ ದಲ್ಲಿ ಸರಿಯಾಗಿ ಆಹಾರ ಪದಾರ್ಥಗಳನ್ನು ವಿತರಣೆ ಮಾಡುವುದಿಲ್ಲ ಎಂದು 1 ನೇ ಆರೋಪಿ ಗಲಾಟೆ ಮಾಡುತ್ತಿದ್ದ ಎಂದರೆ ಸರಿಯಲ್ಲ.

ದಿಃ 23-04-2016 ರಂದು ಸಂಜೆ 6.30 ಗಂಟೆಗೆ ಆರೋಪಿತರೆಲ್ಲರೂ ಸೇರಿ ಚಾಸಾ-1, ಮೃತ ರಾಜಶೆಟ್ಟಿ , ಚಾಸಾ-4, 8 ಹಾಗೂ 13 ರವರೊಂದಿಗೆ ಗಲಾಟೆ ಮಾಡಿ, ಅವಾಚ್ಯ ಶಬ್ದಗಳಿಂದ ಬೈದು, ಅವಮಾನ ಮಾಡಿ ಹಲ್ಲೆ ಮಾಡಿದ್ದರಿಂದ, ಚಾಸಾ-4, 8 ಹಾಗೂ 13 ರವರು ಆಸ್ಪತ್ರೆಗೆ ದಾಖಲಾಗಿರುತ್ತಾರೆ ಎಂದರೆ ಸರಿಯಲ್ಲ. ಆ ಬಗ್ಗೆ ಚಾಸಾ-8 ರವರು ದೂರನ್ನು ನೀಡಿದ್ದಾರೆ ಎಂದರೆ ಸರಿಯಲ್ಲ. ನಂತರ ಸಂಜೆ 7.30 ಗಂಟೆಗೆ ಆರೋಪಿತರೆಲ್ಲರೂ ಚಾಸಾ-1 ರವರ ಮನೆಯ ಬಳಿ ಹೋಗಿ, ಮೃತ ರಾಜಶೆಟ್ಟಿಗೆ ಅವಾಚ್ಯ ಶಬ್ದಗಳಿಂದ ಬೈದು ಆತ್ಮಹತ್ಯೆ ಮಾಡಿಕೊಳ್ಳಲು ಪ್ರಚೋದಿಸಿದ್ದರಿಂದ, ಅದೇ ದಿನ ನಂತರದಲ್ಲಿ ರಾಜಶೆಟ್ಟಿ ವಿಷ ಸೇವನೆ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದರೆ ನನಗೆ ಗೊತ್ತಿಲ್ಲ. ಘಟನೆ ಬಗ್ಗೆ ಎಲ್ಲ ಗೊತ್ತಿದ್ದರೂ ನಿಪಿ-5 ರಂತೆ ಹೇಳಿಕೆ ನೀಡಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ- ಆರೋಪಿತರ ಪರ ಶ್ರೀ ಕೆ ಸಿ ಬಿ ವಕೀಲರಿಂದಃ-**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.